# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಕೃಷ್ಣಾಬಾಯಿ ವಿಠ್ಠಲ ಬಂಡಾರಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಳಕೆರೆ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/BD/1629/2016/ARLO-1, ದಿನಾಂಕ: 04.04.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 03.03.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1) ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ , ಬೆಂಗಳೂರು, ಇವರು ತುಮಕೂರು ಲೋಕಾಯುಕ್ತ ಪೊಲೀಸ್ ನಿರೀಕ್ಷಕರ (ಇನ್ನು ಮುಂದೆ "ತನಿಖಾಧಿಕಾರಿ" ಎಂದು ಕರೆಯಲ್ಪಡುತ್ತಾರೆ) ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳೊಂದಿಗೆ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯನ್ವಯ ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕ್ ತಾಳಕೆರೆ ಗ್ರಾಮ ಪಂಚಾಯತ್‌ನ 1) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀಮತಿ ಕೃಷ್ಣಾಬಾಯಿ ವಿಠಲ ಬಂಡಾರಿ (ಪ್ರಸ್ತುತ ನಾಗರಘಟ್ಟ ಗ್ರಾಮ ಪಂಚಾಯತ್). 2) ಅಧ್ಯಕ್ಷರಾಗಿದ್ದ ಶ್ರೀ ಡಿ.ಬಿ. ನಟರಾಜು ಮತ್ತು 3) ಸದಸ್ಯರಾಗಿದ್ದ ಶ್ರೀ ಪಿ.ಕೆ. ನಂಜೇಗೌಡ (ಇನ್ನು ಮುಂದೆ " 1 ರಿಂದ 3 ನೇ ಎದುರುದಾರ" ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ರವರು ದೂರುದಾರರಾದ ಶ್ರೀ ಡಿ. ಸೋಮಶೇಖರ್ ಬಿನ್ ಡೊಂಕಿಹಳ್ಳಿಗೌಡ, ಡಿಂಕಿಹಳ್ಳಿ ಗ್ರಾಮ, ದಂಡಿನಶಿವರ ಹೋಬಳಿ, ತುರುವೇಕೆರೆ ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ರವರಿಂದ ಸರ್ಕಾರಿ ಕೆಲಸಕ್ಕೆ ಲಂಚದ ಹಣವನ್ನು ಪಡೆದು ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ತೆಗೆದುಕೊಂಡಾಗ, ಈ ಕೆಳಗೆ ಹೇಳಿದ ಸಂಗತಿಗಳು ಮೇಲ್ನೋಟಕ್ಕೆ ಕಂಡು ಬರುತ್ತದೆ.

- ಎದುರುದಾರರು ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕು ತಾಳಕೆರೆ ಗ್ರಾಮ ಪಂಚಾಯಿತಿಗೆ 2013–14 ನೇ ಸಾಲಿನ 13 ನೇ ಹಣಕಾಸು ಯೋಜನೆಯಡಿಯಲ್ಲಿ ಬಿಡುಗಡೆ ಮಾಡಿರುವ ಹಣವನ್ನು ನಿಯಮಾನುಸಾರ ಅನುಸರಿಸದೇ ವಸ್ತುಗಳನ್ನು ಖರೀದಿ ಮಾಡುವಲ್ಲಿ ಅವ್ಯವಹಾರ ಮಾಡಿ ಕಾಮಗಾರಿಯ ಹಣವನ್ನು ದುರುಪಯೋಗ ಪಡಿಸಿಕೊಂಡು ಕರ್ತವ್ಯ ಲೋಪ ಎಸಗಿದ್ದಾರೆ.

- ತುಮಕೂರು ಜಿಲ್ಲೆ ತುರುವೇಕೆ ತಾಲ್ಲೂಕು ತಾಳಕೆರೆ ಗ್ರಾಮ ಪಂಚಾಯಿತಿಯಲ್ಲಿ 13 ನೇ ಹಣಕಾಸು ಯೋಜನೆಯಡಿಯಲ್ಲಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವನ್ನು ಎದುರುದಾರರು ದುರುಪಯೋಗ ಪಡಿಸಿಕೊಂಡಿದ್ದಾರೆಂದು ದೂರುದಾರರು ಲಿಖಿತ ದೂರು ಸಲ್ಲಿಸಿದ್ದು, ಸದರಿ ದೂರನ್ನು ಠಾಣಾ ಗುನ್ನ ಸಂ:14/2014 ರಂತೆ ಪಿ.ಸಿ ಕಾಯ್ದಿ 1988 ಕಲಂ

13(1) (ಸಿ) ಸಹ ಕಲಂ 13(2) ರಂತೆ ಪ್ರಕರಣವನ್ನು ದಾಖಲಿಸಿಕೊಂಡು ದಾಳಿ ಮಾಡಿದ್ದು, ಎದುರುದಾರರು ಮಾಡಿದ ಅವ್ಯವಹಾರವು ಕಂಡು ಬಂದಿದೆ.

- ಅದೇ ದಿನ, ಎದುರುದಾರರಿಂದ ವಿವಿಧ ಕಛೇರಿಯ ದಾಖಲಾತಿಗಳನ್ನು ಜಪ್ತು ಮಾಡಿಕೊಂಡು ಪರಿಶೀಲನ ಮಾಡಲಾಗಿ, ದಾಖಲೆಗಳಲ್ಲಿ ಬರೆಯದೇ ಸಹಿ ಮಾಡದೇ ಚೆಕ್ ಪುಸ್ತಕಗಳನ್ನು ಬರೆದು ಬಡೆದು ಹಾಕಿದ್ದು(ಕ್ಯಾನಸಲ್) ಕಂಡು ಬಂದಿದೆ.
- ಸದರಿ ದಾಖಲೆಗಳನ್ನು ಎದುರುದಾರರಿಂದ ಪಂಚನಾಮೆ ಮೂಲಕ ತನಿಖಾಧಿಕಾರಿಯು ವಶಪಡಿಸಿಕೊಂಡು, ಎದುರುದಾರರನ್ನು ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.
- ಕಛೇರಿಯಲ್ಲಿ ಜಪ್ತು ಮಾಡಲಾದ ದಾಖಲೆಗಳ ಬಗ್ಗೆ ತನಿಖಾಧಿಕಾರಿ ಎದುರುದಾರರನ್ನು ವಿಚಾರಿಸಲಾಗಿ ಎದುರುದಾರರುಗಳು ಯಾವುದೇ ಸಮಂಜಸವಾದ ಉತ್ತರ ಅಥವಾ ವಿವರಣೆ ಅಥವಾ ಲೆಕ್ಕ ನೀಡಿಲ್ಲ.
- ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿಯವರು ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿದೆ.

2) ಮೇಲೆ ಹೇಳಿದ ಕಾರಣಕ್ಕಾಗಿ ಎದುರುದಾರರ ಮೇಲೆ ಶಿಸ್ತು ಕ್ರಮಕ್ಕಾಗಿ ಇಲಾಖಾ ವಿಚಾರಣೆ ನಡೆಸಲು ಸಂಬಂಧಪಟ್ಟ ಪ್ರಾಧಿಕಾರಕ್ಕೆ ಏಕೆ ಶಿಫಾರಸ್ಸು ಮಾಡಬಾರದೆನ್ನುವ ಬಗ್ಗೆ ಎದುರುದಾರರುಗಳಿಂದ ಕಾರಣ ಪಡೆಯಲು ಪರಿವೀಕ್ಷಣಾ ಟಿಪ್ಪಣಿಯನ್ನು ಎದುರುದಾರರುಗಳಿಗೆ ಕಳುಹಿಸಲಾಗಿ, ಎದುರುದಾರರುಗಳು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಉತ್ತರವನ್ನು ಸಲ್ಲಿಸಿದ್ದಾರೆ. ಆದರೆ, 1 ನೇ ಎದುರುದಾರರು ನೀಡಿರುವ ಉತ್ತರದಲ್ಲಿ, ಅವರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ / ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಈ ಹಿನ್ನೆಲೆಯಲ್ಲಿ ಶ್ರೀಮತಿ ಕೃಷ್ಣಾಬಾಯಿ ವಿಠ್ಠಲ ಬಂಡಾರಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಳಕೆರೆ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/301/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 22-04-2017.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಕೃಷ್ಣಾಬಾಯಿ ವಿಠ್ಠಲ ಬಂಡಾರಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಳಕೆರೆ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಪುಟ 1 ರಿಂದ 402 ರವರೆಗೆ ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀಮತಿ ಕೃಷ್ಣಾಬಾಯಿ ವಿಠ್ಠಲ ಬಂಡಾರಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತಾಳಕೆರೆ ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.